## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ರಮೇಶ್,ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ ಇವರ ವಿರುದ್ಧದ ಆರೋಪಗಳ ಕುರಿತು ಲೋಕಾಯುಕ್ತ ವಿಚಾರಣೆ - ಅಂತಿಮ ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 04 ಇಎನ್‌ಕ್ಯೂ 2017 ದಿನಾಂಕ 13.01.2017,
2. ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಕಛೇರಿ ಇವರ ಇಲಾಖಾ ವಿಚಾರಣಾ ವರದಿ ಸಂಖ್ಯೆ: ಉಪಲೋಕಾ-1/ಡಿಇ/103/2017/ಎಆರ್ ಇ-9 ದಿನಾಂಕ 27.01.2021.
3. ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸು ವರದಿ ಸಂಖ್ಯೆ: ಉಪಲೋಕಾ-1/ಡಿಇ/103/2017/ಎಆರ್‌ಇ-9ದಿನಾಂಕ:2.02.2021.
4. ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 23 ಇಎನ್‌ಕ್ಯೂ 2021 ದಿನಾಂಕ 25.03.2021.

****

**ಪ್ರಸ್ತಾವನೆ:**

ಶ್ರೀ ಧರಣಪ್ಪ ತಂದೆ ಪಕೀರವ್ವ ಕಾಳಿ, ಕುದರಿಮೋತಿ ಗ್ರಾಮ,ಕೊಪ್ಪಳ ಜಿಲ್ಲೆ ಇವರು ಕರ್ನಾಟಕ ಲೋಕಾಯುಕ್ತ ಕಛೇರಿಗೆ ಸಲ್ಲಿಸಿದ ದೂರಿನ ಬಗ್ಗೆ ಲೋಕಾಯುಕ್ತ ಸಂಸ್ಥೆಯು ತನಿಖೆಕೈಗೊಂಡು ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ಕೊಪ್ಪಳ ಜಿಲ್ಲೆ, ಕುದರಿಮೋತಿ ಗ್ರಾಮದಲ್ಲಿ ರೂ.95.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಯನ್ನು ಕೈಗೊಂಡು, ಅಂತಿಮವಾಗಿ ಗುತ್ತಿಗೆದಾರರಿಗೆ ರೂ.1,12,09,303/-ಗಳನ್ನು ಪಾವತಿಸಲಾಗಿದೆ. ಈ ಕಾಮಗಾರಿಯಲ್ಲಿ ಅನೇಕ ನ್ಯೂನತೆಗಳು ಇದ್ದು, ಕಳಪೆ ಮತ್ತು ಅವೈಜ್ಞಾನಿಕವಾಗಿ ಕಾಮಗಾರಿ ನಿರ್ವಹಿಸಲಾಗಿದೆ. ಆದ್ದರಿಂದ ಆಪಾದಿತರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರವರು ದಿನಾಂಕ:28.11.2016ರಂದು ಲೋಕಾಯುಕ್ತ ಕಾಯಿದೆ ಕಲಂ 12(3)ರಂತೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದರು. ಸರ್ಕಾರವು ಸದರಿ ವರದಿಯನ್ನು ಪರಿಶೀಲಿಸಲಾಗಿ ಅಂದಾಜು ಪಟ್ಟಿಯಂತೆ ಕಾಂಕ್ರೀಟ್ ರಸ್ತೆಯ ಎರಡೂ ಕಡೆ ಚರಂಡಿ ನಿರ್ಮಾಣ ಮಾಡದೇ, ರಸ್ತೆಯ ಮಧ್ಯದಲ್ಲಿ ನಿರ್ಮಿಸಿರುವುದು ಹಾಗೂ ನಿಗದಿತ ಉದ್ದೇಶಕ್ಕೆ ಮೀಸಲಿರಿಸಿದ್ದ ಹಣವನ್ನು ಸೂಕ್ತ ರೀತಿಯಲ್ಲಿ ಬಳಸದೇ ದುರ್ಬಳಕೆ ಮಾಡಿಕೊಂಡ ಆರೋಪಗಳು ನಿಜವಾಗಿರುವುದು ಮೇಲ್ನೋಟಕ್ಕೆ ಕಂಡುಬಂದ ಕಾರಣದ ಹಿನ್ನೆಲೆಯಲ್ಲಿ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮೇಲೆ ಓದಲಾದ (1) ರ ಆದೇಶದಲ್ಲಿ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಿ ಆದೇಶಿಸಲಾಗಿತ್ತು.

1. ಶ್ರೀ ಆರ್.ಎಂ. ಬಾಣದ್, ಹಿಂದಿನ ಉಪ ಯೋಜನಾ ವ್ಯವಸ್ಥಾಪಕರು, ಜಲ ನಿರ್ಮಲ ಯೋಜನೆ, ಜಿಲ್ಲಾ ಪಂಚಾಯತ್, ಕೊಪ್ಪಳ ಜಿಲ್ಲೆ (ಕರ್ನಾಟಕ ನಾಗರಿಕ ಸೇವಾ ನಿಯಮ 214(2)(ಬಿ) ರಡಿ)
2. ಶ್ರೀ ರಮೇಶ್, ಕಿರಿಯ ಇಂಜಿನಿಯರ್ ಮತ್ತು
3. ಶ್ರೀ ಯಮನಪ್ಪ ರಾಮತಾಳ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯತಿ.

ಸದರಿ ಆದೇಶದನುಸಾರ ಮಾನ್ಯ ಉಪ ಲೋಕಾಯುಕ್ತ ರವರು ಅಪರ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ನೇಮಿಸಿರುತ್ತಾರೆ. ಅದರಂತೆ

--2

ವಿಚಾರಣಾಧಿಕಾರಿಯವರು ಶಿಸ್ತು ಪ್ರಾಧಿಕಾರದ ಪರವಾಗಿ ಸಾಕ್ಷಿದಾರರು, ಆಪಾದಿತ ಅಧಿಕಾರಿ/ನೌಕರರ ಹೇಳಿಕೆಗಳು ಮತ್ತು ಹಲವು ದಾಖಲೆಗಳನ್ನು ಪರಿಶೀಲಿಸಿ, ವಿವರವಾದ ವಿಚಾರಣೆ ನಡೆಸಿದ್ದು, ಸದರಿ ಪ್ರಕರಣದಲ್ಲಿ ಭಾಗಿಯಾದ ಎಲ್ಲಾ 3 ಜನ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿದೆ ಎಂದು ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ಓದಲಾದಂತೆ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತ-1 ರವರು ವಿಚಾರಣಾಧಿಕಾರಿಗಳ ವಿಚಾರಣಾ ವರದಿಯನ್ನು ಪರಿಶೀಲಿಸಿದ್ದು, ಅದರಲ್ಲಿ ಯಾವುದೇ ಆಕ್ಷೇಪಿಸಬಹುದಾದ ಅಂಶಗಳು ಕಂಡುಬಾರದ ಕಾರಣ, ವಿಚಾರಣಾ ವರದಿಯನ್ನು ಒಪ್ಪಿ, ಎಲ್ಲಾ 3 ಜನ ಅಧಿಕಾರಿ/ನೌಕರರ ವಿರುದ್ಧ ಸಾಬೀತಾದ ಆರೋಪಗಳಿಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಮೇಲೆ ಓದಲಾದ ಕ್ರ.ಸಂ.(3) ರಲ್ಲಿ ಓದಲಾದ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪ್ರಕರಣದಲ್ಲಿ ಭಾಗಿಯಾದ ಶ್ರೀ ಆರ್.ಎಂ. ಬಾಣದ್, ಹಿಂದಿನ ಉಪ ಯೋಜನಾ ವ್ಯವಸ್ಥಾಪಕರು, ಜಲ ನಿರ್ಮಲ ಯೋಜನೆ, ಜಿಲ್ಲಾ ಪಂಚಾಯತ್, ಕೊಪ್ಪಳ ಜಿಲ್ಲೆ ಇವರು ದಿನಾಂಕ 30.11.2015 ರಂದು ಸೇವೆಯಿಂದ ವಯೋ ನಿವೃತ್ತಿ ಹೊಂದಿದ್ದು, ಸದರಿಯವರಿಗೆ ಮಾನ್ಯ ಉಪ ಲೋಕಾಯುಕ್ತ ರವರು ಶಿಫಾರಸ್ಸು ಮಾಡಿರುವ ದಂಡನೆಯನ್ನು ವಿಧಿಸಲು ಅವರ ಸಕ್ಷಮ ಪ್ರಾಧಿಕಾರವಾದ ಲೋಕೋಪಯೋಗಿ ಇಲಾಖೆಯು ಕ್ರಮ ವಹಿಸಬೇಕಾಗುತ್ತದೆ. ಆದ್ದರಿಂದ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 23 ಇಎನ್‌ಕ್ಯೂ 2021 ದಿನಾಂಕ 25.03.2021 ರಲ್ಲಿ ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು, ವಿಚಾರಣಾಧಿಕಾರಿಗಳ ವರದಿ ಮತ್ತು ದಾಖಲೆಗಳ ಪ್ರತಿಗಳನ್ನು ಲೋಕೋಪಯೋಗಿ ಇಲಾಖೆಗೆ ಕಳುಹಿಸಿ, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿರುತ್ತದೆ. ಮುಂದುವರೆದು, ಪ್ರಕರಣದಲ್ಲಿ ಭಾಗಿಯಾದ ಶ್ರೀ ಯಮನಪ್ಪ ರಾಮತಾಳ, ಹಿಂದಿನ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕುದರಿಮೋತಿ ಗ್ರಾಮ ಪಂಚಾಯತಿ ಇವರಿಗೆ ಮಾನ್ಯ ಉಪ ಲೋಕಾಯುಕ್ತ ರವರು ಶಿಫಾರಸ್ಸು ಮಾಡಿರುವ ದಂಡನೆಯನ್ನು ವಿಧಿಸಲು ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು, ವಿಚಾರಣಾಧಿಕಾರಿಗಳ ವರದಿ ಮತ್ತು ದಾಖಲೆಗಳ ಪ್ರತಿಗಳನ್ನು ಅವರ ಸಕ್ಷಮ ಪ್ರಾಧಿಕಾರವಾದ ನಿರ್ದೇಶಕರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 25 ಇಎನ್‌ಕ್ಯೂ 2021 ದಿನಾಂಕ 25.03.2021 ರಲ್ಲಿ ಕಳುಹಿಸಿ, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಲಾಗಿರುತ್ತದೆ.

ಶ್ರೀ ರಮೇಶ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವ ಆರೋಪಕ್ಕೆ ವಿಚಾರಣಾ ವರದಿ ಮತ್ತು ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸಿನಂತೆ ಕ್ರಮ ಕೈಗೊಳ್ಳುವ ಪೂರ್ವದಲ್ಲಿ ಅವರಿಗೆ ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು ಮತ್ತು ವಿಚಾರಣಾ ವರದಿಯ ಪ್ರತಿಯನ್ನು ಮೇಲೆ ಓದಲಾದ ಕ್ರ.ಸಂ.(4) ರಲ್ಲಿ ಓದಲಾದ ದಿನಾಂಕ 25.03.2021 ರ 2ನೇ ಕಾರಣ ಕೇಳುವ ನೋಟೀಸ್ ನೊಂದಿಗೆ ಜಾರಿ ಮಾಡಿ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ಸಲ್ಲಿಸಲು ತಿಳಿಸಲಾಗಿತ್ತು.ಆದರೆ ಶ್ರೀ ರಮೇಶ್, ಕಿರಿಯ ಇಂಜಿನಿಯರ್ ರವರಿಗೆ 2ನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಿ ವಿವರಣೆ ಸಲ್ಲಿಸಲು ಕಾಲಾವಕಾಶ ನೀಡಿದ್ದರೂ ಸಹ ಅವರು ಈವರೆಗೆ ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲ.

ಈ ಪ್ರಕರಣದಲ್ಲಿ ಅಪಾದಿತರುಗಳ ವಿರುದ್ಧದ ಆರೋಪಗಳೆಂದರೆ, ಕುದರಿಮೋತಿ ಗ್ರಾಮದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಯನ್ನು ರೂ.95 ಲಕ್ಷ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಂಡಿದ್ದು, ಅಂತಿಮವಾಗಿ ರೂ.1,12,009,303/- ರೂ.ಗಳನ್ನು ಗುತ್ತಿಗೆದಾರರಿಗೆ ಪಾವತಿಸಲಾಗಿದೆಯೆಂದು, ಕಾಮಗಾರಿಯಲ್ಲಿ ಅನೇಕ ನ್ಯೂನತೆಗಳಿದ್ದು, ಕಾಮಗಾರಿಯನ್ನು ಕಳಪೆಯಾಗಿ, ಅವೈಜ್ಞಾನಿಕವಾಗಿ ನಿರ್ವಹಿಸಿರುವುದು, ಅಂದಾಜು ಪಟ್ಟಿಯಲ್ಲಿ ನಿಗದಿಪಡಿಸಿದ ಐಟಂಗಳು ಅಂದರೆ, ಚರಂಡಿ, ಸಿಮೆಂಟ್ ಕಾಂಕ್ರಿಟ್ ರೋಡ್ ಇತರ ಮಂಜೂರಾದ ಅಂದಾಜು ಪಟ್ಟಿಯನುಸಾರ ಅನುಷ್ಠಾನ ಮಾಡದೆ ಅವೈಜ್ಞಾನಿಕವಾಗಿ ಅನುಷ್ಠಾನ ಮಾಡಿರುವುದು ಇತ್ಯಾದಿ ಆರೋಪಗಳನ್ನು ಮಾಡಲಾಗಿದೆ.

ಸರ್ಕಾರವು ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ವಿಚಾರಣಾಧಿಕಾರಿಯವರು ವಿಚಾರಣಾ ವರದಿಯಲ್ಲಿ ತಿಳಿಸಿರುವಂತೆ ವಾಸ್ತವವಾಗಿ ಅಂದಾಜು ಪಟ್ಟಿಯಲ್ಲಿ ರಸ್ತೆಯ ಬದಿಯಲ್ಲಿ ಚರಂಡಿಗೆ ಅವಕಾಶ ಮಾಡಿಕೊಳ್ಳಲಾಗಿದ್ದು, ಆದರೆ ರಸ್ತೆಯ ಎರಡು ಬದಿಯಲ್ಲಿ ಕಾಂಕ್ರಿಟ್ ಚರಂಡಿಯನ್ನು ನಿರ್ಮಾಣ ಮಾಡಿರುವುದಿಲ್ಲ.ಅಂದಾಜು ಪಟ್ಟಿಯಲ್ಲಿ ಅವಕಾಶ ಮಾಡಿಕೊಂಡಂತೆ ನೇಮ್ ಬೋರ್ಡ್ ಹಾಗೂ ಕ್ರಾಸ್ ಡ್ರೈನೇಜ್ ಕಂಡು ಬರುವುದಿಲ್ಲ. ಲೋಕಾಯುಕ್ತ ಕಚೇರಿಯಲ್ಲಿ ಸ್ವೀಕೃತಗೊಂಡ ದೂರಿನ ಮೇರೆಗೆ ಲೋಕಾಯುಕ್ತ ಸಂಸ್ಥೆಯು ಸದರಿ ಪ್ರಕರಣದ ಕಾಮಗಾರಿಗಳ ಖುದ್ದು ಪರಿಶೀಲನೆ ನಡೆಸಿ ತನಿಖೆಯನ್ನು ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ, ಕಾಮಗಾರಿಯು ಮಂಜೂರಾದ ಅಂದಾಜು ಪಟ್ಟಿಯಂತೆ ಅನುಷ್ಠಾನವಾಗದಿರುವುದು ಸ್ಪಷ್ಟವಾಗಿ ಕಂಡುಬರುತ್ತದೆ. ಕಾಮಗಾರಿಯನ್ನು ಮಾರ್ಪಡಿಸಿ ಅನುಷ್ಠಾನ ಮಾಡಿದ ಬಗ್ಗೆ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಆಪಾದಿತರುಗಳು ಒದಗಿಸಿರುವುದಿಲ್ಲ.ವಿಚಾರಣಾಧಿಕಾರಿಯವರು ಆರೋಪಗಳ ಕುರಿತು ಸಾಕ್ಷಿಗಳ ಹೇಳಿಕೆಗಳು,ಶಿಸ್ತು ಪ್ರಾಧಿಕಾರವು ಹಾಜರು ಪಡಿಸಿದ ದಾಖಲೆಗಳು, ಆಪಾದಿತರುಗಳ ಪರವಾಗಿ ಹಾಜರುಪಡಿಸಿದ ದಾಖಲೆಗಳೆಲ್ಲವನ್ನು ಸಮಗ್ರವಾಗಿ ಪರಿಶೀಲಿಸಿ ಚರ್ಚಿಸಿ ಆರೋಪ ಸಾಬೀತಾಗಿದೆಯೆಂದು ಅಭಿಪ್ರಾಯಪಟ್ಟಿರುತ್ತಾರೆ.ಮಾನ್ಯ ಉಪಲೋಕಾಯುಕ್ತರವರು ಸಹ ವಿಚಾರಣಾ ವರದಿಯನ್ನು ಪರಿಶೀಲಿಸಿದ್ದು,ಯಾವುದೇ ಆಕ್ಷೇಪಣೆಯವಾದ ಕಾರಣಗಳು ಕಂಡುಬಂದಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಶ್ರೀ ರಮೇಶ್, ಕಿರಿಯ ಇಂಜಿನಿಯರ್ ರವರು 2ನೇ ಕಾರಣ ಕೇಳುವ ನೋಟೀಸ್ ಗೆ ಯಾವುದೇ ಆಕ್ಷೇಪಣೆಯನ್ನು ಸಲ್ಲಿಸದೇ ಇರುವುದರಿಂದ, ಇವರ ವಿವರಣೆ ಏನು ಇರುವುದಿಲ್ಲವೆಂದು ಪರಿಗಣಿಸಿದೆ.ಆದ್ದರಿಂದ ಸರ್ಕಾರವು ವಿಚಾರಣಾಧಿಕಾರಿಗಳ ನಿರ್ಣಯವನ್ನು ಅಂಗೀಕರಿಸಿ, ಶ್ರೀ ರಮೇಶ್, ಕಿರಿಯ ಇಂಜಿನಿಯರ್ ರವರ ವಿರುದ್ಧ ಸಾಬೀತಾದ ಆರೋಪಗಳಿಗೆ ಅನಗುಣವಾಗಿ ದಂಡನೆ ವಿಧಿಸಲು ನಿರ್ಧರಿಸಿರುತ್ತದೆ.ಆದ್ದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಇಎನ್‌ಕ್ಯೂ 2021 ಬೆಂಗಳೂರು, ದಿನಾಂಕ:12.01.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಸರ್ಕಾರವು ಶ್ರೀ ರಮೇಶ್, ಕಿರಿಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಕೊಪ್ಪಳ ಜಿಲ್ಲೆ ಇವರ ವಿರುದ್ಧ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಅವರಿಗೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8(iii) ರನ್ವಯ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆ ಹಿಡಿಯುವ ಜೊತೆಗೆ ಸರ್ಕಾರಕ್ಕೆ ಉಂಟಾಗಿರುವ ಆರ್ಥಿಕ ನಷ್ಟ ರೂ.1,05,008/-(ಒಂದು ಲಕ್ಷದ ಐದು ಸಾವಿರದ ಎಂಟು ರೂಗಳು ಮಾತ್ರ)ಗಳನ್ನು ಅವರ ವೇತನ ಮತ್ತು ಭತ್ಯೆ ಸೌಲಭ್ಯಗಳಿಂದ ವಸೂಲಿ ಮಾಡುವ ದಂಡನೆ ವಿಧಿಸಿ, ಆದೇಶಿಸಿದೆ.

ಮೇಲ್ಕಂಡಂತೆ ಶ್ರೀ ರಮೇಶ್, ಕಿರಿಯ ಇಂಜಿನಿಯರ್,ಇವರಿಗೆ ವಿಧಿಸಲಾದ ದಂಡನೆಯನ್ನು ಜಾರಿಗೊಳಿಸಲು ಹಾಗೂ ಆರೋಪಿತರಿಂದ ಸರ್ಕಾರಕ್ಕೆ ಉಂಟಾದ ನಷ್ಟವನ್ನು ವಸೂಲಿ ಮಾಡಲು ಜರೂರು ಕ್ರಮ ತೆಗೆದುಕೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
ಕ. ನದೀಮ್ 12/1/22
(ಕ. ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1) ಮಹಾ ಲೇಖಪಾಲರು (ಲೆಕ್ಕಪತ್ರ 1&2) ಆಡಿಟ್, ಕರ್ನಾಟಕ, ಬೆಂಗಳೂರು,

2) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹು ಮಹಡಿಗಳ ಕಟ್ಟಡ, ಬೆಂಗಳೂರು,
3) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಜಿಲ್ಲೆ,
5) ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
6) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು,
7) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್. ವೃತ್ತ, ಬೆಂಗಳೂರು,
8) ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಪಯೋಗಿ ಇಲಾಖೆ(ಸೇವೆಗಳು ಬಿ& ಸಿ)
9) ಸಂಬಂಧಪಟ್ಟ ನೌಕರರಿಗೆ - ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಜಿಲ್ಲೆ ಇವರ ಮುಖಾಂತರ,
10) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ,
11) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ-1) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ,
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.